ಮಾರ್ಪಾಡಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಗಳನ್ನು ಸಧ್ಯದಲ್ಲಿಯೇ ನಿಗಮದ ತಾಂತ್ರಿಕ ಉಪಸಮಿತಿಯ ಅನುಮೋದನೆಗಾಗಿ ಮಂಡಿಸುವ ಹಂತದಲ್ಲಿರುತ್ತವೆ.

ಇ) ಬ್ಯಾರೇಜುಗಳ ಪರಿಷ್ಕರಿಸಿದ ವಿನ್ಯಾಸ, ನಕ್ಷೆ ಮತ್ತು ಅಂದಾಜು ಪಟ್ಟಿಗಳು ನಿಗಮದ ತಾಂತ್ರಿಕ ಉಪಸಮಿತಿಯ ಅನುಮೋದನೆ ಪಡೆದುಕೊಂಡು ನಾಲ್ಕು ತಿಂಗಳ ಅವಧಿಯೊಳಗೆ ಪ್ರಾರಂಭಿಸಲು ಹಾಗೂ ಎರಡು ವರ್ಷ ಕಾಲಾವಧಿಯೊಳಗಾಗಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

315(686) ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಂವಿಧಾನದ 74ನೇ ತಿದ್ದುಪಡಿ ಪ್ರಕಾರ ನಗರಸಭೆಗೆ ಸ್ವಾಯಕ್ತತೆ ನೀಡುವ ಬಗ್ಗೆ ಸರ್ಕಾರ ಉದ್ದೇಶಿಸಿದೆಯೇ ;

ಆ) ನಗರಸಭೆಗಳಿಗೆ ನಿಯಮಾನುಸಾರ ರಾಜ್ಯ ಸರ್ಕಾರದ ಅನುದಾನ ಬಿಡುಗಡೆಯಾಗಿದೆಯೇ;

ಇ) ನಗರಸಭೆಯ ಆಡಳಿತ ಸುಧಾರಣೆಗೆ ಸಂಬಂಧಿಸಿದಂತೆ ಉಡುಪಿ ನಗರಸಭೆಯಲ್ಲಿ ಖಾಲಿ ಇರುವ ಸಿಬ್ಬಂದಿಗಳನ್ನು ಯಾವಾಗ ನೇಮಿಸಿಕೊಳ್ಳಲಾಗುವುದು;

ಈ) ನಗರಸಭೆಗಳಿಗೆ ಅಧ್ಯಕ್ಷ ಉಪಾಧ್ಯಕ್ಷರ ಮೀಸಲಾತಿಯನ್ನು ಯಾವಾಗ ಪ್ರಕಟಿಸಲಾಗುವುದು; ನಗರ ಸಭೆಗಳಲ್ಲಿ ಅಧ್ಯಕ್ಷ ಮೀಸಲಾತಿ ಘೋಷಣೆ ಆಗದೇ ಆಡಳಿತ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಎನ್.ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ರಾಜ್ಯ ಹಣಕಾಸು ಆಯೋಗದ ಅನುದಾನದ ಅಡಿ ನಿಯಮಾನುಸಾರ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಇ) ನಗರಸಭೆಯಲ್ಲಿ ಖಾಲಿ ಇರುವ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪತ್ರ ಬರೆದು ಕ್ರಮ ತೆಗೆದುಕೊಳ್ಳಲಾಗಿದೆ ಹಾಗೂ ಇತರೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.

ಈ) ಮೀಸಲಾತಿ ಸಂಬಂಧ ಅಧಿಸೂಚನೆ ಹೊರಡಿಸಿದ್ದು ಸದರಿ ಅಧಿಸೂಚನೆಗೆ ಉಚ್ಚ ನ್ಯಾಯಾಲಯವು ತಡೆ ಆಜ್ಞೆ ನೀಡಿದೆ ಹಾಗೂ ವಿಷಯವು ನ್ಯಾಯಾಲಯದ ಮುಂದೆ ವಿಚಾರಣೆಯಲ್ಲಿದೆ.

316(687) ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಖಾಸಗಿ ಮಾಲಿಕರುಗಳು ತಮ್ಮ ಸ್ವಂತಕ್ಕೆಂದು ಪರವಾನಿಗೆ ಪಡೆದಿರುವ ಕಾರುಗಳಲಿ ಬಾಡಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆಗುವ ನಷ್ಟ ಎಷ್ಟು ?

ಇ) ಇದರ ಬಗ್ಗೆ ಸರ್ಕಾಠವು ಯಾವ ಕಾನೂನು ಕ್ರಮ ಕೈಗೊಳ್ಳುವುದು?

ಈ) ಈ ಕಾರುಗಳಲ್ಲಿ ಅಪಘಾತವಾದಲ್ಲಿ ಪ್ರಯಾಣಿಕರಿಗೆ ಏನು ಪಾವತಿಸಲು ಆಗುತ್ತದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ(ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಇಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

317(688) ಶ್ರೀ ರಘುಪತಿ ಭಟ್.ಕೆ (ಉಡುಪಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಉಡುಪಿ ಜಿಲ್ಲೆಯಲ್ಲಿ ಇರುವ ಮೀನುಗಾರಿಕೆ ರಸ್ತೆಗಳ ಸಂಖ್ಯೆ ಎಷ್ಟು :

ಆ) ಈ ರಸ್ತೆಗಳ ಅಭಿವೃದ್ಧಿಗೆ ಪ್ರಸ್ತುತ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆಗೊಳಿಸಲಾಗಿದೆ;

ಇ) ಈ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸುವ ಯೋಜನೆ ಸರ್ಕಾರದ ಮುಂದಿದೆಯೇ :

ಈ) ಸಂಪೂರ್ಣವಾಗಿ ಹಾಳಾದ ಈ ರಸ್ತೆಗಳನ್ನು ಯಾವ ಯೋಜನೆ ಅಡಿಯಲ್ಲಿ ದುರಸ್ತಿ ಪಡಿಸಲಾಗುವುದು ?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಉಡುಪಿ ಜಿಲ್ಲೆಯಲ್ಲಿರುವ ಮೀನುಗಾರಿಕೆ ಕೊಂಡಿ ರಸ್ತೆಗಳ ಸಂಖ್ಯೆ 81. ಅಲ್ಲದೆ ನಬಾರ್ಡ್ ನೆರವಿನ ಆರ್.ಐ.ಡಿ.ಎಫ್. ಯೋಜನೆಯಲ್ಲಿ ಜಿಲ್ಲೆಯಲ್ಲಿ ಒಟ್ಟು 28 ರಸ್ತೆಗಳನ್ನು ನಿರ್ಮಿಸಲಾಗಿದೆ.

ಆ) ಪ್ರಸ್ತುತ ಸಾಲಿನಲ್ಲಿ ಉಡುಪಿ ಜಿಲ್ಲೆಗೆ ರೂ. 3.88 ಲಕ್ಷ ಅನುದಾನವನ್ನು ಮೀನುಗಾರಿಕೆ ರಸ್ತೆಗಳ ದುರಸ್ತಿ ಹಾಗೂ ನಿರ್ವಹಣೆಗೆ ಬಿಡುಗಡೆ ಮಾಡಿದ್ದು ಪೂರ್ಣ ಅನುದಾವನ್ನು ವೆಚ್ಚ ಮಾಡಲಾಗಿದೆ. ಆರ್.ಐ.ಡಿ.ಎಫ್. ಯೋಜನೆಯಲ್ಲಿ ಉಡುಪಿ ಜಿಲ್ಲೆಯಲ್ಲಿ ರಸ್ತೆಗಳ ನಿರ್ಮಾಣ ಮತ್ತು ಅಭಿವೃದ್ಧಿಗಾಗಿ 16 ಕಾಮಗಾರಿಗಳಿಗೆ ಪ್ರಸಕ್ತ ಸಾಲಿನಲ್ಲಿ 17.79 ಲಕ್ಷ ರೂ.ಗಳನ್ನು ವೆಚ್ಚ ಮಾಡಲಾಗಿದೆ.

ಇ) ಕರಾವಳಿ ಜಿಲ್ಲೆಗಳ ಮೀನುಗಾರಿಕೆ ಕೊಂಡಿ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ವರ್ಗಾಯಿಸುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಮೀನುಗಾರಿಕೆ ಕೊಂಡಿ ರಸ್ತೆಗಳ ನಿರ್ವಹಣೆ ಮತ್ತು ದುರಸ್ತಿಗಾಗಿ ರೂ. 294.40 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

318(689) ಶ್ರೀ ರಘುಪತಿ ಭಟ್ .ಕೆ (ಉಡುಪಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಅಖಿಲ ಭಾರತ ಪರವಾನಿಗೆ ಹೊಂದಿರುವ ಪ್ರವಾಸಿ ಕಾರುಗಳಿಗೆ ತೆರಿಗೆ ವಸೂಲಿಯಲ್ಲಿ ಆಗುತ್ತಿರುವ ಕಿರುಕುಳದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ?